5

ಇಲಾಖೆ / ವಿಷಯ : DEPARTMENT / SUBJECT: ಹಿಂದುಳಿದ ವರ್ಗಗಳು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 19/2/2021

# ಸಂಪುಟದಲ್ಲಿ ಮೀಸಲಾತಿ ಚರ್ಚೆ

ಬೆಂಗಳೂರು: ರಾಜ್ಯದಲ್ಲಿ ಮೀಸಲಾತಿ ಸಂಬಂಧ ನಡೆದಿರುವ ಪಾದಯಾತ್ರೆ, ಹೋರಾಟ ಹಾಗೂ ಮನವಿಗಳ ಕುರಿತು ಗುರುವಾರ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಸುದೀರ್ಘವಾಗಿ ಚರ್ಚೆ ನಡೆದಿದೆ. ಆದರೆ, ಯಾವುದೇ ತೀರ್ಮಾನ ಕೈಗೊಂಡಿಲ್ಲ. ಮೀಸಲಾತಿ ಸಂಬಂಧ ಸುಪ್ರೀಂಕೋರ್ಟ್ ತೀರ್ಪುಗಳು, ಆಯೋಗಗಳ ಪ್ರಸ್ತಾವನೆ ಸೇರಿದಂತೆ ಎಲ್ಲ ವಿಚಾರಗಳ ಬಗ್ಗೆ ಕಾನೂನು ತಜ್ಞರ ಜತೆ ಸಮಾಲೋಚನೆ ನಡೆಸಿ ಮತ್ತೆ ಸಂಪುಟದಲ್ಲಿ ಚರ್ಚಿಸಲು ನಿರ್ಧರಿಸಲಾಗಿದೆ. ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರೂ ಆದ ಬಸವರಾಜ ಬೊಮ್ಮಾಯಿ, ಮೀಸಲಾತಿ ಮನವಿಗಳ ಕುರಿತು ಸಂಪುಟದಲ್ಲಿ ಚರ್ಚೆ ನಡೆಯಿತು. ಇದುವರೆಗಿನ ವಿದ್ಯಮಾನಗಳ ಬಗ್ಗೆ ಮುಖ್ಯಮಂತ್ರಿಯವರು ಸಭೆಗೆ ತಿಳಿಸಿದರು. ಸಚಿವರೂ ಸಹ ತಮ್ಮ ತಮ್ಮ ಅಭಿಪ್ರಾಯ ಹೇಳಿದರು. ಸಂವಿಧಾನದ ಚೌಕಟ್ಟಿನಲ್ಲಿ ಕೆಲವು ತೀರ್ಮಾನ ಕೈಗೊಳ್ಳುವುದು. ಯಾರ್ಯಾರು ಬೇಡಿಕೆ ಇಟ್ಟಿದ್ದಾರೆ ಎಷ್ಟರ ಮಟ್ಟಿಗೆ ಬೇಡಿಕೆಗಳಿಗೆ ನ್ಯಾಯಸಮ್ಮತ ತೀರ್ಮಾನ ಕೈಗೊಳ್ಳಬೇಕು ಎಂಬುಗರ ಬಗ್ಗೆ ಇನ್ನಷ್ಟು ವಿವರ ಪಡೆದು ನಂತರ ಸಂಪುಟದ ಮುಂದೆ ಬರುತ್ತೇನೆ ಎಂದು ಮುಖ್ಯಮಂತ್ರಿಯವರು ತಿಳಿಸಿದರು. ಇನ್ನೂ ಹಲವಾರು ಸಣ್ಣ ಸಮುದಾಯಗಳು ಸಹ ಮೀಸಲಾತಿ ಹಾಗೂ ಇತರೆ ಸೌಲಭ್ಯಗಳ ಬಗ್ಗೆ ಸರ್ಕಾರಕ್ಕೆ ಹಾಗೂ ನೇರವಾಗಿ ಶಾಶ್ವತ ಹಿಂದುಳಿದ ವರ್ಗಗಳ ಆಯೋಗಕ್ಕೆ ಕೊಟ್ಟಿವೆ. ಅವೆಲ್ಲವನ್ನೂ ಸಮಗ್ರವಾಗಿ ಕಾನೂನು ತಜ್ಞರ ಜತೆ ಚರ್ಚಿಸಿ ತೀರ್ಮಾನ ಮಾಡಬೇಕು ಎಂಬ ಸಲಹೆಯೂ ಸಂಪುಟದಲ್ಲಿ ನೀಡಲಾಯಿತು ಎಂದು ಹೇಳಿದರು.



- **ಸುಪ್ರೀಂಕೋರ್ಟ್ ತೀರ್ಪುಗಳು, ಆಯೋಗಗಳ ಪ್ರಸ್ತಾವನೆ ಬಗ್ಗೆ ಸಮಾಲೋಚಿಸಿ ಸಂಪುಟದಲ್ಲಿ ಚರ್ಚೆ**

## ಮಾತಿನ ಚಕಮಕಿ

ಸಂಪುಟ ಸಭೆಯಲ್ಲಿ ಮೀಸಲಾತಿ ಸಂಬಂಧ ಪಂಚಮಸಾಲಿ ಹಾಗೂ ಲಿಂಗಾಯತ ಸಚಿವರ ನಡುವೆಯೇ ಬಿಸಿ ಧ್ವನಿಯ ಮಾತಿನ ಚಕಮಕಿ ನಡೆಯಿತು. ಹೋರಾಟದಿಂದ ಸರ್ಕಾರ ಇಕ್ಕಟ್ಟಿಗೆ ಸಿಲುಕಿದಂತಾಗಿದೆ ಎಂದು ಕೆಲವರು ಅಸಮಾಧಾನ ವ್ಯಕ್ತಪಡಿಸಿದರು. ಮತ್ತೆ ಕೆಲವು ಸಚಿವರು ಕುರುಬರ ಮೀಸಲಾತಿ ಹೋರಾಟದ ಬಗ್ಗೆಯೂ ಪ್ರಸ್ತಾಪಿಸಿದರು. ಆದರೆ, ಮುಖ್ಯಮಂತ್ರಿಯವರು ಎಲ್ಲರನ್ನೂ ಸಮಾಧಾನ ಪಡಿಸಿ ನಿಮ್ಮ ಅಭಿಪ್ರಾಯ ಹೇಳಿದ್ದೀರಿ ಮುಂದಿನ ದಿನಗಳಲ್ಲಿ ಚರ್ಚಿಸಿ ನ್ಯಾಯಸಮ್ಮತ ತೀರ್ಮಾನ ಕೈಗೊಳ್ಳೋಣ ಸುಮ್ಮನಿರಿ ಎಂದು ಸಮಾಧಾನಪಡಿಸಿದರು ಎಂದು ಹೇಳಲಾಗಿದೆ.